# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 06-11-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಇಂದಿರಾ ಅರುಣ್, ರಿವೋಬ್ ಅಸೋಸಿಯೇಷನ್,
3. ಶ್ರೀ/ಶ್ರೀಮತಿ ರೋಸಿತಾ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್
4. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
5. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) ವಾರ್ಡ್ ವ್ಯಾಪ್ತಿಯಲ್ಲಿ ಹಾಲೀ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ವಿವರ ಹಾಗೂ ಸದರಿ ಪೌರಕಾರ್ಮಿಕರಿಗೆ ನಿಯೋಜಿಸಿರುವ ರಸ್ತೆಗಳ ವಿವರಗಳನ್ನು ಸಲ್ಲಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರ ವಿವರ ಹಾಗೂ ನಿಯೋಜಿಸಿರುವ ರಸ್ತೆಗಳ ವಿವರಗಳನ್ನು ನೀಡಲು ಆರೋಗ್ಯ ನಿರೀಕ್ಷಕರಿಗೆ ತಿಳಿಸಿದರು.

2) ಮಾರುತಿ ಸೇವಾನಗರ ವ್ಯಾಪ್ತಿಯ ವೀಲರ್ ರಸ್ತೆಯಲ್ಲಿ ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ಹಣ್ಣಿನ ಅಂಗಡಿ ಇಟ್ಟು ವ್ಯಾಪಾರ ವಹಿವಾಟು ನಡೆಸುತ್ತಿದ್ದು, ಇದರಿಂದ ಪಾದಾಚಾರಿ ಮಾರ್ಗದಲ್ಲಿ ಸಂಚರಿಸುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿ, ಸದರಿ ಹಣ್ಣಿನ ಅಂಗಡಿ ಮಾಲೀಕರಿಗೆ ನೀಡಿರುವ ಪರವಾನಿಗೆ ಪತ್ರವನ್ನು ರದ್ದುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ವಾರ್ಡ್ ವ್ಯಾಪ್ತಿಯಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವು ಕಾರ್ಯಾಚರಣೆ ಮಾಡಲು ಸಭೆಗೆ ತಿಳಿಸಿದರು.

3) ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚೆಗೆ ರಸ್ತೆಯ ಎಲ್ಲೆಂದರಲ್ಲಿ ಪ್ಲಾಸ್ಟಿಕ್ ಬ್ಯಾಗ್‌ಗಳು ಬಿದ್ದಿದ್ದು, ಪ್ಲಾಸ್ಟಿಕ್ ಬ್ಯಾಗ್‌ಗಳನ್ನು ಉಪಯೋಗಿಸುತ್ತಿರುವ ಅಂಗಡಿಗಳನ್ನು ಗುರುತಿಸಿ, ಅಂಗಡಿ ಮಾಲೀಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಘನತ್ಯಾಜ್ಯ ನಿರ್ವಹಣೆ ರವರು ಹಾಗೂ ಆರೋಗ್ಯ ನಿರೀಕ್ಷಕರು ಪ್ರತಿ ಅಂಗಡಿಗಳನ್ನು ತಪಾಸಣೆ ಮಾಡಿ, ಅಂಗಡಿಗಳಲ್ಲಿ ಸಿಗುವ ಪ್ಲಾಸ್ಟಿಕ್ ಕವರ್‌ಗಳನ್ನು ಜಪ್ತಿ ಮಾಡಿ, ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲು ತಿಳಿಸಲಾಯಿತು.

4) ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಲಾಯ್ಡ್ ರಸ್ತೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾಯ್ದೆಯನ್ನು ಉಲ್ಲಂಘಿಸಿ, ಕಟ್ಟಡ ನಿರ್ಮಾಣ ಮಾಡುತ್ತಿದ್ದು, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಕಾಮಗಾರಿ ಇಲಾಖೆಯ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಲು ಸೂಚಿಸಿದರು.

5) ವಾರ್ಡ್ ವ್ಯಾಪ್ತಿಯ ಡಾಮಿನೋಸ್ ಪಿಜ್ಜಾ ಹಟ್ ಶಾಪಿನ ಮುಂಭಾಗದಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ರವರು ಅಳವಡಿಸಿರುವ ಪೈಪ್‌ಲೈನ್ ಹಾಳಾಗಿದ್ದು, ಇದರಿಂದ ನೀರು ರಸ್ತೆಗೆ ಹರಿಯುತ್ತಿದ್ದು, ಇದನ್ನು ಕೂಡಲೇ ಸರಿಪಡಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ರವರ ಗಮನಕ್ಕೆ ತಂದು, ಕೂಡಲೇ ದುರಸ್ತಿಪಡಿಸಲು ಕ್ರಮ ವಹಿಸಲು ಸೂಚಿಸಿದರು.

6) ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಕಡೆಗಳಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗಳು ಬಾಕಿ ಇದ್ದು, ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುದಾನದ ಕೊರತೆ ಇದ್ದು, ಕಳೆದ 2-3 ವರ್ಷಗಳ ಆಯವ್ಯಯದಲ್ಲಿ ಬಿಡುಗಡೆಗೊಳಿಸುವ ಅನುದಾನವು ಸಾಕಾಗುತ್ತಿಲ್ಲ ಇದರಿಂದ ಅಭಿವೃದ್ಧಿ ಕಾಮಗಾರಿಗಳು ನಡೆಯದೇ ಇರುವುದು ಕಂಡುಬಂದಿದ್ದು, ಪ್ರತಿ ಮಾಹೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳುವ ವಾರ್ಡ್ ಕಮಿಟಿ ಸಭೆಗೆ ಅವಶ್ಯಕತೆ ಏನು ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದೆಂದು ಸಭೆಗೆ ತಿಳಿಸಿದರು.

7) ವಾರ್ಡ್ ವ್ಯಾಪ್ತಿಯ ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ಬಾಣಸವಾಡಿ ಮುಖ್ಯರಸ್ತೆಗಳಲ್ಲಿ ಇತ್ತೀಚೆಗೆ ಸಂಚಾರ ದಟ್ಟಣೆ ಹೆಚ್ಚಾಗುತ್ತಿದ್ದು, ಸಾರ್ವಜನಿಕರಿಗೆ ಹಾಗೂ ಶಾಲಾ/ಕಾಲೇಜು ಮಕ್ಕಳಿಗೆ ತುಂಬಾ ತೊಂದರೆಯಾಗುತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಗಿ, ಈ ಬಗ್ಗೆ ಸಂಬಂಧಪಟ್ಟ ಇಲಾಖೆಯೊಂದಿಗೆ ಚರ್ಚಿಸಿ, ಸಂಚಾರ ದಟ್ಟಣೆಯನ್ನು ತಗ್ಗಿಸಲು ಕ್ರಮ ವಹಿಸಲು ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.